# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 321
ಸದಸ್ಯರ ಹೆಸರು : ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 12.07.2018
ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

*****

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ತಾಲ್ಲೂಕಿನ ಆರಾಪೂರ ಹತ್ತಿರ 110/11 ಕೆ.ವಿ. ಸಬ್–ಸ್ಟೇಷನ್ ಪ್ರಾರಂಭ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ರಾಯಚೂರು ತಾಲ್ಲೂಕಿನ ಆಶಾಪೂರ ರಸ್ತೆಯಲ್ಲಿ ಹೊಸದಾಗಿ 110/11 ಕೆ.ವಿ. ವಿದ್ಯುತ್ ಉಪಕೇಂದ್ರ ಸ್ಥಾಪಿಸುವ ಪ್ರಸ್ತಾವನೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಮುಂದೆ ಇದ್ದು, ಅಗತ್ಯವಿರುವ ಜಮೀನು ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| ಆ) | ರಾಯಚೂರು ತಾಲ್ಲೂಕಿನ ಕಾಡ್ಲೂರನಲ್ಲಿ 110/11 ಕೆ.ವಿ. ಸಬ್–ಸ್ಟೇಷನ್ ಪ್ರಾರಂಭ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಯಾವಾಗ ಮಂಜೂರಾತಿ ದೊರೆಯಲ್ಲಿದೆ ; | ರಾಯಚೂರು ತಾಲ್ಲೂಕಿನ ಕಾಡ್ಲೂರು ಗ್ರಾಮದಲ್ಲಿ 110/11ಕೆ.ವಿ. ವಿದ್ಯುತ್ ಉಪಕೇಂದ್ರ ಸ್ಥಾಪಿಸುವ ಪ್ರಸ್ತಾವನೆಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿ ಸಭೆಯಲ್ಲಿ ಅನುಮೋದನೆಗೊಂಡಿದ್ದು, ಅಗತ್ಯವಿರುವ ಜಮೀನು ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| ಇ) | ಮಾನ್ವಿ ತಾಲ್ಲೂಕಿನ ಅಡಲು ಅಮರೇಶ್ವರ ಮತ್ತು ಹರವಿ ಹತ್ತಿರ 110/11 ಕೆ.ವಿ. ಸಬ್–ಸ್ಟೇಷನ್ ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ; | ಮಾನ್ವಿ ತಾಲ್ಲೂಕಿನ ಅಡವಿ ಅಮರೇಶ್ವರದಲ್ಲಿ 110 ಕೆ.ವಿ. ವಿದ್ಯುತ್ ಉಪಕೇಂದ್ರ ಹಾಗೂ ಸಂಬಂಧಿತ 110 ಕೆ.ವಿ. ಪ್ರಸರಣ ಮಾರ್ಗ ನಿರ್ಮಾಣದ ಕಾಮಗಾರಿಗಳು ಪ್ರಗತಿಯಲ್ಲಿವೆ.<br>ಮಾನ್ವಿ ತಾಲ್ಲೂಕಿನ ಹರವಿ ಗ್ರಾಮದಲ್ಲಿ 110/11 ಕೆವಿ. ವಿದ್ಯುತ್ ಉಪಕೇಂದ್ರ ಸ್ಥಾಪನೆಗೆ ಅಗತ್ಯವಿರುವ ಜಮೀನು ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| ಈ) | ರಾಯಚೂರು ಜಿಲ್ಲೆಯ ಪ್ರಸ್ತುತ ರೈತರ ಪಂಪ್‌ಸೆಟ್‌ಗಳಿಗೆ 3 ಫೇಸ್ ವಿದ್ಯುತ್ SPLIT ಮಾಡಿಕೊಡುತ್ತಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಿ ನಿರಂತರ 3 ಫೇಸ್ ವಿದ್ಯುತ್ ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ? | ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ವ್ಯಾಪಿಯಲ್ಲಿ ಬರುವ ರಾಯಚೂರು ಜಿಲ್ಲೆಯ ತುಂಗಭದ್ರಾ ಮತ್ತು ಕೃಷ್ಣಾ ನದಿ ತೀರದ ಪ್ರದೇಶದ ರೈತರ ಕೃಷಿ ಪಂಪಸೆಟ್ಟಗಳಿಗೆ ಸತತವಾಗಿ 7 ತಾಸು 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.<br>ಇನ್ನುಳಿದ ಪ್ರದೇಶದ ರೈತರ ಕೃಷಿ ಪಂಪಸೆಟಗಳಿಗೆ ಸರ್ಕಾರದ ಆದೇಶದಂತೆ ಬೆಳಗಿನ ವೇಳೆಯಲ್ಲಿ 4 ಗಂಟೆಗಳ ಕಾಲ ಮತ್ತು ರಾತ್ರಿ ವೇಳೆಯಲ್ಲಿ 3 ಗಂಟೆಗಳ ಕಾಲ 3 ಫೇಸ್ ವಿದ್ಯುತ್ತನ್ನು ಸರಬರಾಜು ಮಾಡಲಾಗುತ್ತಿದೆ. |

ಸಂಖ್ಯೆ: ಇಎನ್ 121 ಇಬಿಎಸ್ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ